ಸಿಬ್ಬಂದಿ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದ ಮೂಲಕ ಆಯ್ಕೆಗೊಳಪಟ್ಟಿರುವ ಸಂಗತಿ ನಿಜವಲ್ಲವೇ?

ಆ) ಸದರಿ ಸಂಸ್ಥೆಯ ಆಡಳಿತ ವರ್ಗದವರು ಏಕಾಏಕಿಯಾಗಿ ಈ ಸಂಸ್ಥೆಯನ್ನು ನಡೆಸಲು ಸಾಧ್ಯವಿಲ್ಲವೆಂದು ಅದನ್ನು ಸರ್ಕಾರದ ವಶಕ್ಕೆ ಹಿಂತಿರುಗಿಸುವುದಾಗಿಯೂ ಹಾಗೂ ಅದರ ಪರಿಣಾಮ ಹಾಲಿ ಇರುವ ಸಿಬ್ಬಂದಿಯನ್ನು ಸೇವೆಯಿಂದ ತೆಗೆದುಹಾಕುವುದಾಗಿ ಬೆದರಿಕೆ ಹಾಕುತ್ತಿರುವ ವಿಷಯವು ಸರ್ಕಾರದ ಗಮನಕ್ಕೆ ಬಂದಿದೆಯೇ? ಹಾಗಿದ್ದಲ್ಲಿ ಈ ದಿಸೆಯಲ್ಲಿ ಅಂಧರ ಸದರಿ ಸಿಬ್ಬಂದಿಗಳಿಗೆ ನೌಕರಿ ಭದ್ರತೆಯನ್ನು ನೀಡಲು ಕೈಗೊಳ್ಳಲು ಉದ್ದೇಶಿಸಿರುವ ಕ್ರಮಗಳೇನು?

ಶ್ರೀಮತಿ ವಿಮಲಬಾಯಿ ಜಗದೇವ್‌ರಾವ್ ದೇಶ್‌ಮುಖ್ (ಮಹಿಳಾ ಮತ್ತು ಮಕ್ಕಳ ಕಲ್ಯಾಣ ರಾಜ್ಯ ಸಚಿವರು):-

ಅ) ಈ ಸಂಸ್ಥೆಯಲ್ಲಿ ಕೆಲಸ ನಿರ್ವಹಿಸುತ್ತಿರುವ ಸಿಬ್ಬಂದಿಗಳನ್ನು ನೇಮಕ ಮಾಡುವಾಗ ರಾಷ್ಟ್ರೀಯ ಅಂಧರ ಸಂಸ್ಥೆ, ಬೆಂಗಳೂರುರವರು ಉದ್ಯೋಗ ವಿನಿಮಯ ಕೇಂದ್ರದಿಂದ ಅರ್ಜ ಅಭ್ಯರ್ಥಿಗಳ ಪಟ್ಟಿ ತರಿಸಿಕೊಂಡಿರುತ್ತಾರೆ.

ಆ) ರಾಷ್ಟ್ರೀಯ ಅಂಧರ ಸಂಸ್ಥೆ, ಬೆಂಗಳೂರುರವರು ಈ ತರಬೇತಿ ಕೇಂದ್ರಗಳನ್ನು ಆಡಳಿತಾತ್ಮಕ ಕಾರಣಗಳಿಗಾಗಿ ನಡೆಸಲು ಸಾಧ್ಯವಿರುವುದಿಲ್ಲವೆಂದು ಕಳೆದ ಒಂದೆರಡು ವರ್ಷಗಳಲ್ಲಿ ಸರ್ಕಾರಕ್ಕೆ ಮುಂಚಿತವಾಗಿಯೇ ತಿಳಿಸುತ್ತಾ ಬಂದಿದ್ದಾರೆ. ಸಿಬ್ಬಂದಿಗಳನ್ನು ಸೇವೆಯಿಂದ ತೆಗೆದು ಹಾಕುವ ವಿಷಯವು ಸರ್ಕಾರದ ಗಮನಕ್ಕೆ ಬಂದಿಲ್ಲ. ಆದ್ದರಿಂದ ಸದರಿ ಸಿಬ್ಬಂದಿಗಳಿಗೆ ನೌಕರಿ ಭದ್ರತೆ ಒದಗಿಸುವ ಪ್ರಶ್ನೆ ಉದ್ಭವಿಸುವುದಿಲ್ಲ.

ವಿಷಯ:- ಮುಜರಾಯಿ ಇಲಾಖೆಗೆ ಸೇರಿದ ನೀಲಸಂದ್ರದ ಶ್ರೀ ಧರ್ಮರಾಯ ಸ್ವಾಮಿ ದೇವಸ್ಥಾನದಲ್ಲಿ ದುರುಪಯೋಗ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 241 (230)

ಶ್ರೀಮತಿ ಪ್ರಮೀಳಾ ನೇಸರ್ಗಿ (ಚಾಮರಾಜಪೇಟೆ):- ಮಾನ್ಯ ಮುಜರಾಯಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವಿರೆ?

ಅ) ಮುಜರಾಯಿ ಇಲಾಖೆಗೆ ಸೇರಿದ ನೀಲಸಂದ್ರದಲ್ಲಿನ ಶ್ರೀಧರ್ಮರಾಯಸ್ವಾಮಿ ದೇವಸ್ಥಾವದ ಆಡಳಿತವು ಧರ್ಮದರ್ಶಿಗಳಿಂದ ದುರುಪಯೋಗವಾಗುತ್ತಿರುವುದು ನಿಜವೇ?

ಆ) ಇಲಾಖೆಯ ನಿಯಂತ್ರಣದಿಂದ ದೇವಸ್ಥಾನದ ಆಡಳಿತವನ್ನು ತಪ್ಪಿಸಲು ಧರ್ಮದರ್ಶಿಗಳು ಪ್ರಯತ್ನಿಸುತ್ತಿರುವುದು ನಿಜವೇ?

ಇ) ಮೇಲ್ಕಂಡ ದೇವಾಲಯದಲ್ಲಿ ಬೃಹತ್ ಪ್ರಮಾಣದಲ್ಲಿ ಅವ್ಯವಹಾರ ನಡೆದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಶ್ರೀ ಬಿ.ಮುನಿಯಪ್ಪಮುದ್ದಪ್ಪ (ಮುಜರಾಯಿ ಸಚಿವರು):-

ಅ) ಮುಜರಾಯಿ ಇಲಾಖೆಗೆ ಸಂಬಂಧಿಸಿದಂತೆ ನೀಲಸಂದ್ರದಲ್ಲಿ ಧರ್ಮರಾಯಸ್ವಾಮಿ ದೇವಸ್ಥಾನ ಇರುವುದಿಲ್ಲ.

ಆ) ಉದ್ಭವಿಸುವುದಿಲ್ಲ.

ಇ) ಉದ್ಭವಿಸುವುದಿಲ್ಲ.

ವಿಷಯ:- ಮೈಸೂರಿನ ಅಂಧರ ಕೈಗಾರಿಕಾ ತರಬೇತಿ ಕೇಂದ್ರವನ್ನು ಸರ್ಕಾರ ವಹಿಸಿಕೊಳ್ಳುವ ಬಗ್ಗೆ.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 242 (769)

ಶ್ರೀಮತಿ ಪ್ರಮೀಳಾ ನೇಸರ್ಗಿ (ಚಾಮರಾಜಪೇಟೆ):- ಮಾನ್ಯ ಮಹಿಳಾ ಮತ್ತು ಮಕ್ಕಳ ಕಲ್ಯಾಣ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವಿರೆ?

ಅ) ಮೈಸೂರಿನಲ್ಲಿರುವ ಅಂಧರ ಕೈಗಾರಿಕಾ ತರಬೇತಿ ಕೇಂದ್ರವನ್ನು ಸರ್ಕಾರದ ವಶಕ್ಕೆ ತೆಗೆದುಕೊಳ್ಳಲು ಇರುವ ಅಡ್ಡಿ ಆತಂಕಗಳೇನು?

ಆ) ಸದರಿ ಸಂಸ್ಥೆಗೆ ಸರ್ಕಾರವು ಶೇ. 100ರಷ್ಟು ಧನ ಸಹಾಯ ನೀಡುತ್ತಿರುವುದು ನಿಜವಲ್ಲವೇ? ಹಾಗೂ ಈ ಸಂಸ್ಥೆಯ ಆಸ್ತಿ ಪಾಸ್ತಿಗಳು ಸರ್ಕಾರದ ಹೆಸರಿನಲ್ಲಿರುವುದು ನಿಜವಲ್ಲವೇ

ಇ) ಮೇಲ್ಕಂಡ ಸಂಸ್ಥೆಯು ಅನುದಾನ ಪಡೆಯುತ್ತಿರುವ ಪ್ರಯುಕ್ತ ಅಲ್ಲಿನ ಸಿಬ್ಬಂದಿಗೆ ಸರ್ಕಾರಿ ನೌಕರರಿಗೆ ನೀಡುತ್ತಿರುವ ವೇತನ ಸೌಲಭ್ಯವನ್ನು ಕಲ್ಪಿಸುವಲ್ಲಿ ಇರುವ ಅಡಚಣೆಗಳೇನು?

ಶ್ರೀಮತಿ ವಿಮಲಬಾಯಿ ಜಗದೇವ್‌ರಾವ್ ದೇಶ್‌ಮುಖ್ (ಮಹಿಳಾ ಮತ್ತು ಮಕ್ಕಳ ಕಲ್ಯಾಣ ರಾಜ್ಯ ಸಚಿವರು):-

ಅ) ಈ ಕೇಂದ್ರವನ್ನು ಸ್ವಯಂ ಸೇವಾ ಸಂಸ್ಥೆಯು ನಡೆಸುತ್ತಿರುವುದರಿಂದ ಇದನ್ನು ಸರ್ಕಾರ ವಹಿಸಿಕೊಳ್ಳುವ ಅವಶ್ಯಕತೆ ಇಲ್ಲವೆಂಬುದು ಸರ್ಕಾರದ ಅಭಿಪ್ರಾಯವಾಗಿದೆ.

ಆ) ಹೌದು. ಸರ್ಕಾರದ ಅನುದಾನದಿಂದ ಖರೀದಿಸಿರುವ ಈ ಸಂಸ್ಥೆಯ ಆಸ್ತಿಪಾಸ್ತಿಗಳು ಸರ್ಕಾರದ್ದಾಗಿರುತ್ತವೆ.

ಇ) ಈ ಕೇಂದ್ರವನ್ನು ಇಲಾಖೆಯ 1982ರ ರಾಜ್ಯ ಅನುದಾನ ಸಂಹಿತೆಗೆ ಅಳವಡಿಸಿಲ್ಲ. ಇಲ್ಲಿ ಕೆಲಸ ನಿರ್ವಹಿಸುತ್ತಿರುವ ಸಿಬ್ಬಂದಿಗಳು ಸ್ವಯಂ ಸೇವಾ ಸಂಸ್ಥೆಯಾದ ರಾಷ್ಟ್ರೀಯ ಅಂಧರ ಸಂಸ್ಥೆ, ಬೆಂಗಳೂರುರವರು ಅನುಷ್ಠಾನಗೊಳಿಸುತ್ತಿರುವ ಒಂದು ಯೋಜನೆಗಾಗಿ ಸದರಿ ಸಂಸ್ಥೆಯಿಂದ ನೇಮಕವಾಗಿದ್ದಾರೆ. ಆದ್ದರಿಂದ ಸರ್ಕಾರದ ವೇತನ